## ಕರ್ನಾಟಕ ವಿಧಾನಪರಿಷತ್ತು

| | | |
|---|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | : | 1607 |
| ವಿಧಾನ ಪರಿಷತ್ ಸದಸ್ಯರ ಹೆಸರು | : | ಶ್ರೀ ಆರ್ ಬಿ ತಿಮ್ಮಾಪುರ |
| ಉತ್ತರಿಸುವ ದಿನಾಂಕ | : | 11-03-2022 |
| ಉತ್ತರಿಸುವ ಸಚಿವರು | : | ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು. |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ | ಸಮಾಜ ಕಲ್ಯಾಣ ಇಲಾಖೆ ವ್ಯಾಪ್ತಿಗೆ ಬರುವ ಎಲ್ಲಾ ಶಾಲಾ-ಕಾಲೇಜುಗಳ ವಿದ್ಯಾರ್ಥಿಗಳಿಗೆ ಪ್ರತಿ ಸಾಲಿನಲ್ಲಿ ತಪ್ಪದೆ ವಿದ್ಯಾರ್ಥಿವೇತನವನ್ನು ನೀಡಲಾಗುತ್ತಿದೆಯೇ; (5 ವರ್ಷಗಳ ಮಾಹಿತಿ ನೀಡುವುದು) | ಸಮಾಜ ಕಲ್ಯಾಣ ಇಲಾಖೆಯಿಂದ 01 ರಿಂದ 05ನೇ ತರಗತಿಯ 68 ವಸತಿ ಶಾಲೆಗಳನ್ನು ನಿರ್ವಹಿಸುತ್ತಿದ್ದು, ಇಲ್ಲಿ ದಾಖಲಾದ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿವೇತನ ನೀಡುವ ಯೋಜನೆ ಇರುವುದಿಲ್ಲ. ಮುಂದುವರೆದು ಇಲಾಖೆಯಿಂದ ಯಾವುದೇ ಕಾಲೇಜು ನಿರ್ವಹಣೆ ಮಾಡುತ್ತಿಲ್ಲ.<br>ಆದರೆ, ರಾಜ್ಯದಲ್ಲಿ ಕಾರ್ಯನಿರ್ವಹಿಸುತ್ತಿರುವ ಶಾಲಾ-ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ ಪರಿಶಿಷ್ಟ ಜಾತಿ ವಿದ್ಯಾರ್ಥಿಗಳಿಗೆ ಸಮಾಜ ಕಲ್ಯಾಣ ಇಲಾಖೆಯಿಂದ ಕೆಳಕಂಡ ವಿದ್ಯಾರ್ಥಿವೇತನ ನೀಡಲಾಗುತ್ತಿದೆ.<br><br>**ಮೆಟ್ರಿಕ್ ಪೂರ್ವ ವಿದ್ಯಾರ್ಥಿವೇತನ:**<br>ಕುಟುಂಬದ ವಾರ್ಷಿಕ ಆದಾಯ ಮಿತಿ ರೂ. 6.00 ಲಕ್ಷ ಮಿತಿಯೊಳಗಿರುವ 1 ರಿಂದ 8ನೇ ತರಗತಿಯಲ್ಲಿ ವ್ಯಾಸಂಗ ಮಾಡುತ್ತಿರುವ ಪರಿಶಿಷ್ಟ ಜಾತಿ ವಿದ್ಯಾರ್ಥಿಗಳಿಗೆ ರಾಜ್ಯ ಸರ್ಕಾರ ಒದಗಿಸಿರುವ ಅನುದಾನದಿಂದ ಹಾಗೂ ಕುಟುಂಬದ ವಾರ್ಷಿಕ ಆದಾಯ ಮಿತಿ ರೂ. 2.50 ಲಕ್ಷ ಮಿತಿಯೊಳಗಿರುವ 9 ಮತ್ತು 10ನೇ ತರಗತಿಯಲ್ಲಿ ವ್ಯಾಸಂಗ ಮಾಡುತ್ತಿರುವ ಪರಿಶಿಷ್ಟ ಜಾತಿ ವಿದ್ಯಾರ್ಥಿಗಳಿಗೆ ಕೇಂದ್ರ ಸರ್ಕಾರ ಒದಗಿಸಿರುವ ಅನುದಾನದಿಂದ ಮೆಟ್ರಿಕ್ ಪೂರ್ವ ವಿದ್ಯಾರ್ಥಿವೇತನ ಮಂಜೂರು ಮಾಡಲಾಗುತ್ತಿದೆ.<br>**ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ:**<br><br>ಕುಟುಂಬದ ವಾರ್ಷಿಕ ಆದಾಯ ಮಿತಿ ರೂ. 2.50 ಲಕ್ಷ ಮಿತಿಯೊಳಗಿರುವ ಪ್ರಥಮ ಪಿಯುಸಿ ಮತ್ತು ನಂತರದ ಎಲ್ಲಾ ಕೋರ್ಸುಗಳಲ್ಲಿ ವ್ಯಾಸಂಗ ಮಾಡುತ್ತಿರುವ ಪರಿಶಿಷ್ಟ ಜಾತಿ ವಿದ್ಯಾರ್ಥಿಗಳಿಗೆ ಕೇಂದ್ರ ಸರ್ಕಾರ ಒದಗಿಸಿರುವ ಅನುದಾನದಿಂದ ವಿದ್ಯಾರ್ಥಿವೇತನ ಮಂಜೂರು ಮಾಡಲಾಗುತ್ತಿದೆ.<br>2017-18, 2018-19, 2019-20, 2020-21 ಮತ್ತು 2021-22ನೇ ಸಾಲಿನಲ್ಲಿ ವಿದ್ಯಾರ್ಥಿವೇತನ ಮಂಜೂರಾತಿ ವಿವರ ಈ ಕೆಳಕಂಡಂತಿದೆ. |

| ವರ್ಷ | ಪಾವತಿ ಮಾಡಿದ ಅರ್ಜಿಗಳ ಸಂಖ್ಯೆ | |
|---|---|---|
| | ಮೆಟ್ರಿಕ್ ಪೂರ್ವ ವಿದ್ಯಾರ್ಥಿವೇತನ | ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ |
| 2017-18 | 9,66,526 | 3,24,477 |
| 2018-19 | 10,30,893 | 3,33,759 |
| 2019-20 | 9,74,586 | 3,45,215 |
| 2020-21 | 8,86,789 | 3,02,854 |
| 2021-22 | 6,82,300 | 1,13,986 |

(2021-22 ನೇ ಸಾಲಿಗೆ ಸಂಬಂಧಿಸಿದಂತೆ ಮಂಜೂರಾತಿ ಪ್ರಕ್ರಿಯೆ ಪ್ರಗತಿಯಲ್ಲಿದೆ.)

<table>
<tr>
<td>ಆ</td>
<td>ಈ ಉದ್ದೇಶಕ್ಕಾಗಿ ಪಾವತಿ ಮಾಡಲು ಸರ್ಕಾರಕ್ಕೆ ವರ್ಷಕ್ಕೆ ಎಷ್ಟು ಹಣದ ಅವಶ್ಯಕತೆ ಇದೆ;</td>
<td>ಮೆಟ್ರಿಕ್ ಪೂರ್ವ ವಿದ್ಯಾರ್ಥಿವೇತನ ಕಾರ್ಯಕ್ರಮ ಅನುಷ್ಠಾನಕ್ಕಾಗಿ ವಾರ್ಷಿಕವಾಗಿ ಅಂದಾಜು ರೂ. 150.00 ಕೋಟಿಗಳ ಅನುದಾನ ಹಾಗೂ ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ ಕಾರ್ಯಕ್ರಮ ಅನುಷ್ಠಾನಕ್ಕಾಗಿ ವಾರ್ಷಿಕವಾಗಿ ಅಂದಾಜು ರೂ. 450.00 ಕೋಟಿಗಳ ಅನುದಾನ ಅವಶ್ಯಕತೆ ಇದೆ.</td>
</tr>
<tr>
<td>ಇ</td>
<td>ಸದರಿ ವಿದ್ಯಾರ್ಥಿಗಳ ಪೈಕಿ, ವಿದ್ಯಾರ್ಥಿವೇತನ ಪಾವತಿಸದಿರುವ ಪ್ರಕರಣಗಳೇನಾದರೂ ಇವೆಯೇ; (ವಿವರಗಳನ್ನು ಒದಗಿಸುವುದು)</td>
<td>ಮೆಟ್ರಿಕ್ ಪೂರ್ವ ಮತ್ತು ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ ಕಾರ್ಯಕ್ರಮದಡಿ ಆಧಾರ್ ಸೀಡಿಂಗ್‌ಗೆ ಬಾಕಿ ಉಳಿದಿರುವ ಅರ್ಜಿಗಳಿಗೆ ವಿದ್ಯಾರ್ಥಿವೇತನ ಮೊತ್ತ ಪಾವತಿಸಲು ಬಾಕಿ ಇರುತ್ತದೆ.<br><br>2018-19ನೇ ಸಾಲಿನಿಂದ ಮೆಟ್ರಿಕ್ ಪೂರ್ವ ವಿದ್ಯಾರ್ಥಿವೇತನ ಕಾರ್ಯಕ್ರಮವನ್ನು ಹಾಗೂ 2019-20ನೇ ಸಾಲಿನಿಂದ ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ ಕಾರ್ಯಕ್ರಮವನ್ನು ಇ-ಆಡಳಿತ ಇಲಾಖೆಯವರಿಂದ ಅಭಿವೃದ್ಧಿಪಡಿಸಿ ನಿರ್ವಹಣೆ ಮಾಡಲಾಗುತ್ತಿರುವ ರಾಜ್ಯ ವಿದ್ಯಾರ್ಥಿವೇತನ ಪೋರ್ಟಲ್ ತಂತ್ರಾಂಶದ ಮೂಲಕ ವಿದ್ಯಾರ್ಥಿವೇತನ ಮಂಜೂರು ಮಾಡಲಾಗುತ್ತಿದೆ. ಮಂಜೂರಾದ ವಿದ್ಯಾರ್ಥಿವೇತನ ಮೊತ್ತವನ್ನು ಡಿ.ಬಿ.ಟಿ. ಪೋರ್ಟಲ್ ಮೂಲಕ ವಿದ್ಯಾರ್ಥಿಯ ಆಧಾರ್ ಜೋಡಿತ ಬ್ಯಾಂಕ್ ಖಾತೆಗೆ ನೇರವಾಗಿ ಜಮೆ ಮಾಡಲಾಗುತ್ತಿದೆ. ಆಧಾರ್ ಸೀಡಿಂಗ್ ಆದ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿವೇತನ ಮೊತ್ತ ಜಮೆ ಮಾಡಲಾಗುತ್ತಿದೆ.</td>
</tr>
<tr>
<td>ಈ</td>
<td>ಹಾಗಿದ್ದಲ್ಲಿ, ಯಾವ ಸಾಲುಗಳಿಂದ ಎಷ್ಟೆಷ್ಟು ಹಣ ಬಾಕಿ ಇದೆ? (ವರ್ಷವಾರು ಮಾಹಿತಿ ನೀಡುವುದು) ಪಾವತಿಸದಿರಲು ಕಾರಣಗಳೇನು?</td>
<td>2020-21 ಮತ್ತು 2021-22ನೇ ಸಾಲಿನಲ್ಲಿ ವಿತರಿಸಲು ಬಾಕಿ ಇರುವ ವಿದ್ಯಾರ್ಥಿವೇತನದ ವಿವರ ಈ ಕೆಳಕಂಡಂತಿದೆ.<br><br>
<table>
<tr><th>ವರ್ಷ</th><th>ವಿತರಿಸಲು ಬಾಕಿ ಇರುವ ವಿದ್ಯಾರ್ಥಿಗಳ ಸಂಖ್ಯೆ</th><th>ಮೊತ್ತ (ರೂ.ಕೋಟಿಗಳಲ್ಲಿ)</th></tr>
<tr><td colspan="3">ಮೆಟ್ರಿಕ್ ಪೂರ್ವ ವಿದ್ಯಾರ್ಥಿವೇತನ</td></tr>
<tr><td>2020-21</td><td>48,676</td><td>5.57</td></tr>
<tr><td>2021-22</td><td>2,62,630</td><td>32.77</td></tr>
<tr><td colspan="3">ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ</td></tr>
<tr><td>2020-21</td><td>18,041</td><td>47.75</td></tr>
<tr><td>2021-22</td><td>2,05,433</td><td>389.19</td></tr>
</table>
<br>ವಿದ್ಯಾರ್ಥಿವೇತನವನ್ನು ಸಕಾಲದಲ್ಲಿ ವಿದ್ಯಾರ್ಥಿಗಳಿಗೆ ಜಮೆ ಮಾಡಲು ಈ ಕೆಳಕಂಡ ಸವಾಲುಗಳನ್ನು ಎದುರಿಸಲಾಗುತ್ತಿದೆ.<br><br>
• ಮೆಟ್ರಿಕ್ ಪೂರ್ವ ವಿದ್ಯಾರ್ಥಿವೇತನ ಸಂಬಂಧ ಶಿಕ್ಷಣ ಇಲಾಖೆಯ SATS Data ಮುಖಾಂತರ <u>ರಾಜ್ಯ ವಿದ್ಯಾರ್ಥಿವೇತನ ಪೋರ್ಟಲ್(SSP)</u>ಗೆ ನೇರವಾಗಿ ಮಾಹಿತಿ ಪಡೆಯಲಾಗುತ್ತಿದ್ದು, ಆ ಸಮಯಲ್ಲಿ ವಿದ್ಯಾರ್ಥಿಯ ಆಧಾರ್ ಕಾರ್ಡ್‌ನಲ್ಲಿ ನಮೂದಾಗಿರುವ ಹೆಸರಿಗೂ ಹಾಗೂ SATS Data ದಲ್ಲಿ ನಮೂದಾಗಿರುವ ಹೆಸರಿಗೂ ವ್ಯತ್ಯಾಸವಿದ್ದಲ್ಲಿ ಮಂಜೂರು ಮಾಡಲು ವಿಳಂಬವಾಗುತ್ತದೆ.<br>
• ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ ಸಂಬಂಧ <u>ರಾಜ್ಯ ವಿದ್ಯಾರ್ಥಿವೇತನ ಪೋರ್ಟಲ್(SSP)</u> ತಂತ್ರಾಂಶದಲ್ಲಿ ವಿದ್ಯಾರ್ಥಿಯ ಶೈಕ್ಷಣಿಕ ದಾಖಲಾತಿಯಾದ Bonafide Details ಗಳು ಸಂಬಂಧಪಟ್ಟ ವಿಶ್ವವಿದ್ಯಾಲಯ/ಇಲಾಖೆಗಳಿಂದ ಸ್ವೀಕೃತವಾಗದೇ ಇರುವುದರಿಂದ ಹಾಗೂ ಕೋರ್ಸುವಾರು ನಿಗದಿಪಡಿಸಿದ ಶುಲ್ಕಗಳ ವಿವರಗಳನ್ನು ಸಂಬಂಧಪಟ್ಟ ಇಲಾಖೆ/ವಿಶ್ವವಿದ್ಯಾಲಯಗಳ ತಂತ್ರಾಂಶದಲ್ಲಿ Update ಮಾಡದೇ ಇರುವುದರಿಂದ ಅಂತಹ ಪ್ರಕರಣಗಳಲ್ಲಿ ವಿದ್ಯಾರ್ಥಿವೇತನ ಮಂಜೂರಾತಿ ಮಾಡಲು ವಿಳಂಬವಾಗುತ್ತದೆ.</td>
</tr>
</table>

| | | |
|---|---|---|
| | | • ಮಂಜೂರಾದ ವಿದ್ಯಾರ್ಥಿವೇತನವನ್ನು ಡಿ.ಬಿ.ಟಿ. ಪೋರ್ಟಲ್ ಮೂಲಕ ವಿದ್ಯಾರ್ಥಿಗಳ ಬ್ಯಾಂಕ್ ಖಾತೆಗೆ ನೇರವಾಗಿ ಜಮೆ ಮಾಡಲಾಗುತ್ತಿದ್ದು, ಸದರಿ ಪ್ರಕ್ರಿಯೆಗೆ ಆಧಾರ್ ಸೀಡಿಂಗ್ ಕಡ್ಡಾಯವಾಗಿರುತ್ತದೆ.<br>ಈ ಸಂಬಂಧ, ಇಲಾಖೆಯಿಂದ ಈ ಕೆಳಕಂಡ ಕ್ರಮಗಳನ್ನು ತೆಗೆದುಕೊಂಡು ಎಲ್ಲಾ ಅರ್ಹ ವಿದ್ಯಾರ್ಥಿಗಳಿಗೆ ಸರಿಯಾದ ಸಮಯಕ್ಕೆ ವಿದ್ಯಾರ್ಥಿವೇತನ ಮಂಜೂರು ಮಾಡಲು ಕ್ರಮವಹಿಸಲಾಗಿರುತ್ತದೆ.<br>• ಆಧಾರ್ ಸೀಡಿಂಗ್ ಸಂಬಂಧ ಅಪರ ಮುಖ್ಯ ಕಾರ್ಯದರ್ಶಿಗಳು ಮತ್ತು ಅಭಿವೃದ್ಧಿ ಆಯುಕ್ತರ ಅಧ್ಯಕ್ಷತೆಯಲ್ಲಿ ಸಭೆಗಳನ್ನು ನಡೆಸಿ ವಿವಿಧ ಇಲಾಖೆಗಳೊಂದಿಗೆ ಸಮನ್ವಯ ಮಾಡಿ ಪ್ರಗತಿ ಸಾಧಿಸಲಾಗುತ್ತಿದೆ.<br>• ಸಮಾಜ ಕಲ್ಯಾಣ ಇಲಾಖೆಯಿಂದ ವಿದ್ಯಾರ್ಥಿವೇತನ ಅಭಿಯಾನ ನಡೆಸಿ ವಿದ್ಯಾರ್ಥಿಗಳು ಸರಿಯಾದ ರೀತಿಯಲ್ಲಿ ಅರ್ಜಿ ಸಲ್ಲಿಸಲು ಅರಿವು ಮೂಡಿಸಲಾಗಿರುತ್ತದೆ.<br>• ಇ-ಆಡಳಿತ ಇಲಾಖೆಯು ಸಂಬಂಧಪಟ್ಟ ಕಾಲೇಜುಗಳಿಂದ ಶಾಲಾ ಶುಲ್ಕಗಳನ್ನು ಪಡೆಯಲು ಹಾಗೂ ಸದರಿ ಶುಲ್ಕಗಳನ್ನು ತಂತ್ರಾಂಶದಲ್ಲಿ ಅಳವಡಿಸಲು ದಿನಂಪ್ರತಿ ಉನ್ನತ ಶಿಕ್ಷಣ ಇಲಾಖೆಯೊಂದಿಗೆ ಸಮನ್ವಯ ಸಾಧಿಸಲಾಗುತ್ತಿದೆ. |

ಸಕಇ 192 ಪಕವಿ 2022

(ಕೋಟ ಶ್ರೀನಿವಾಸ ಪೂಜಾರಿ)
ಸಮಾಜ ಕಲ್ಯಾಣ ಮತ್ತು
ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು.